## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ : ಪ್ರೌಢಶಾಲಾ ಶಿಕ್ಷಕರ ವೃಂದ ಮತ್ತು ನೇಮಕಾತಿ ನಿಯಮಗಳು–2016ರ ಪೂರ್ವದಲ್ಲಿ ಖಾಸಗಿ ಅನುದಾನಿತ ಪ್ರೌಢಶಾಲೆಗಳಲ್ಲಿ ಸಹಶಿಕ್ಷಕರು(ಹಿಂದಿ) ಹುದ್ದೆಗೆ ನೇಮಕಾತಿ ಹೊಂದಿ ಕರ್ತವ್ಯ ನಿರ್ವಹಿಸುತ್ತಿರುವ ಶಿಕ್ಷಕರುಗಳ ನೇಮಕಾತಿಯನ್ನು ಅನುಮೋದಿಸಿ ವೇತನಾನುದಾನಕ್ಕೆ ಒಳಪಡಿಸುವ ಬಗ್ಗೆ.

ಪುಟ್ಟಣ್ಣ
ಸದಸ್ಯರು
ಕರ್ನಾಟಕ ವಿಧಾನ ಪರಿಷತ್

ಓದಲಾಗಿದೆ:

1. ಸರ್ಕಾರದ ಅಧಿಸೂಚನೆ ಸಂಖ್ಯೆ : ಡಿಪಿಎಆರ್ 59 ಎಸ್ಆರ್ಇ 2002, ದಿನಾಂಕ : 24/06/2003.
2. ಮಾನ್ಯ ಕರ್ನಾಟಕ ಉಚ್ಚ ನ್ಯಾಯಾಲಯ ರಿಟ್ ಅರ್ಜಿ ಸಂಖ್ಯೆ: 2772/2011 & 69822–826/2012, ದಿನಾಂಕ : 30/07/2015.
3. ಸರ್ಕಾರದ ಅಧಿಸೂಚನೆ ಸಂಖ್ಯೆ : ಇಡಿ 291 ಎಲ್‌ಬಿಪಿ 2015, ದಿನಾಂಕ : 29/09/2016.
4. ಸರ್ಕಾರದ ಆದೇಶ ಸಂಖ್ಯೆ : ಇಡಿ 25 ಎಲ್‌ಬಿಪಿ 2017, ದಿನಾಂಕ : 18/04/2017.
5. ನಿರ್ದೇಶಕರು (ಪ್ರೌಢ ಶಿಕ್ಷಣ), ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು, ಇವರ ಪತ್ರ ಸಂಖ್ಯೆ : ಸಿ8(4) ಶಾ.ಶಿ.ಅ. ಹಿಂದಿ ಶಿಕ್ಷಕರ ಮಾಹಿತಿ–01/2017–18, ದಿನಾಂಕ : 03/01/2018.

** ** ** **

ಪ್ರಸ್ತಾವನೆ :–

ಪ್ರೌಢಶಾಲಾ ಸಹಶಿಕ್ಷಕರ ವೃಂದ ಮತ್ತು ನೇಮಕಾತಿ ನಿಯಮಗಳ ಅಧಿಸೂಚನೆ ಸಂಖ್ಯೆ :ಸಿಆಸುಇ 59 ಎಸ್ಆರ್ಇ 2002 ದಿ :24.06.2003ನ್ನು ಮಾನ್ಯ ಕರ್ನಾಟಕ ಉಚ್ಚ ನ್ಯಾಯಾಲಯದಲ್ಲಿ ರಿಟ್ ಅರ್ಜಿ ಸಂಖ್ಯೆ :2772/2011 ಮತ್ತು ಇತರೆ ಪ್ರಕರಣಗಳಲ್ಲಿ ಮಾನ್ಯ ನ್ಯಾಯಾಲಯವು ದಿನಾಂಕ :30.07.2015ರ ತೀರ್ಪಿನಲ್ಲಿ ರದ್ದುಪಡಿಸಿದ ಹಿನ್ನೆಲೆಯಲ್ಲಿ, NCTEಯು ಪ್ರೌಢಶಾಲಾ ಶಿಕ್ಷಕರಿಗೆ ನಿಗಧಿಪಡಿಸಿರುವ ವಿದ್ಯಾರ್ಹತೆಯ ಮಾನದಂಡಗಳನ್ವಯ ಪ್ರೌಢಶಾಲಾ ಶಿಕ್ಷಕರ ವೃಂದ ಮತ್ತು ನೇಮಕಾತಿ ನಿಯಮಗಳ 2016ನ್ನು ರಚಿಸಿ, ದಿನಾಂಕ : 23.03.2015 ರಿಂದ ಪೂರ್ವಾನ್ವಯವಾಗಿ ಜಾರಿಗೆ ಬರುವಂತೆ ಮೇಲೆ ಓದಲಾದ ಕ್ರಮಾಂಕ[03]ರಲ್ಲಿ ಅಧಿಸೂಚನೆ ಹೊರಡಿಸಲಾಗಿರುತ್ತದೆ, ಮುಂದುವರೆದು ಪ್ರೌಢಶಾಲಾ ಶಿಕ್ಷಕರ ವೃಂದ ಮತ್ತು ನೇಮಕಾತಿ ನಿಯಮಗಳು 2002ರನ್ವಯ ಹಿಂದಿ ಭಾಷಾ ಶಿಕ್ಷಕರುಗಳಿಗೆ ಬಿ.ಎ ಮತ್ತು ಬಿ.ಇಡಿ ವಿದ್ಯಾರ್ಹತೆಗೆ ತತ್ಸಮಾನ ವಿದ್ಯಾರ್ಹತೆಯೆಂದು ಪರಿಗಣಿಸಿ

ಹೊರಡಿಸಲಾಗಿದ್ದ ಎಲ್ಲಾ ಆದೇಶಗಳನ್ನು ಮೇಲೆ ಓದಲಾದ ಕ್ರಮಾಂಕ[4]ರ ಆದೇಶದಲ್ಲಿ ರದ್ದುಪಡಿಸಲಾಗಿರುತ್ತದೆ.

ಪ್ರೌಢಶಾಲಾ ಶಿಕ್ಷಕರ ವೃಂದ ಮತ್ತು ನೇಮಕಾತಿ ನಿಯಮಗಳು 2016ರನ್ವಯ ಪ್ರೌಢಶಾಲಾ ಹಿಂದಿ ಭಾಷಾ ಶಿಕ್ಷಕರುಗಳ ನೇಮಕಾತಿ ಹೊಂದಲು ವಿಶ್ವವಿದ್ಯಾಲಯದ ಧನಸಹಾಯ ಆಯೋಗದಿಂದ ಮಾನ್ಯತೆ ಪಡೆದ ಅಂಗೀಕೃತ ವಿಶ್ವವಿದ್ಯಾಲಯದಿಂದ ಬಿ.ಎ ಪದವಿಯನ್ನು ಪಡೆದು, ಪದವಿಯಲ್ಲಿ ಹಿಂದಿ ಭಾಷೆಯನ್ನು ಐಚ್ಚಿಕ ವಿಷಯವನ್ನು ವ್ಯಾಸಂಗ ಮಾಡಿರಬೇಕು ಮತ್ತು ಬಿ.ಇಡಿ ಪದವಿಯಲ್ಲಿ ಹಿಂದಿ ವಿಷಯವನ್ನು ಬೋಧನಾ ಮಾಧ್ಯಮವಾಗಿ ವ್ಯಾಸಂಗ ಮಾಡಿರುವ ವಿದ್ಯಾರ್ಹತೆಯನ್ನು ನಿಗಧಿಪಡಿಸಲಾಗಿರುತ್ತದೆ.

ಪ್ರೌಢಶಾಲಾ ಶಿಕ್ಷಕರ ವೃಂದ ಮತ್ತು ನೇಮಕಾತಿ ನಿಯಮಗಳು 2016ಗಳು ಪ್ರಕಟಗೊಳ್ಳುವ ಪೂರ್ವದಲ್ಲಿ ಖಾಸಗಿ ಅನುದಾನಿತ ಪ್ರೌಢಶಾಲೆಗಳಲ್ಲಿ ಪ್ರೌಢಶಾಲಾ ಶಿಕ್ಷಕರ ವೃಂದ ಮತ್ತು ನೇಮಕಾತಿ ನಿಯಮಗಳು 2002ರನ್ವಯ ಅನುಮತಿ ನೀಡಿರುವ ಹಾಗೂ ನೇಮಕಗೊಂಡಿರುವ ಹಿಂದಿ ಭಾಷಾ ಶಿಕ್ಷಕರುಗಳ ನೇಮಕಾತಿಯನ್ನು ಪ್ರಸ್ತುತ ಚಾಲ್ತಿಯಲ್ಲಿರುವ ವೃಂದ ಮತ್ತು ನೇಮಕಾತಿ ನಿಯಮಗಳನ್ವಯ ವಿದ್ಯಾರ್ಹತೆ ಹೊಂದಿರುವುದಿಲ್ಲವೆಂಬ ಕಾರಣಕ್ಕಾಗಿ ಅನುದಾನಕ್ಕೆ ಒಳಪಡಿಸುವ ಪ್ರಸ್ತಾವನೆಗಳನ್ನು ತಿರಸ್ಕರಿಸಲಾಗಿರುತ್ತದೆ.

ಈ ಸಂಬಂಧ ಸರ್ಕಾರದಲ್ಲಿ ಸ್ವೀಕೃತಗೊಂಡ ಮನವಿಗಳ ಕುರಿತಂತೆ ಮೇಲೆ ಓದಲಾದ ಕ್ರಮಾಂಕ[05]ರಲ್ಲಿ ಪ್ರಸ್ತಾವನೆ ಸಲ್ಲಿಸಿದ್ದು, ಪ್ರೌಢಶಾಲಾ ಶಿಕ್ಷಕರ ವೃಂದ ಮತ್ತು ನೇಮಕಾತಿ ನಿಯಮಗಳು 2016ರ ಪೂರ್ವದಲ್ಲಿ ಅನುದಾನಿತ ಪ್ರೌಢಶಾಲೆಗಳಿಗೆ ಮಂಜೂರಾದ ಅನುದಾನಿತ ಹಿಂದಿ ಭಾಷಾ ಶಿಕ್ಷಕರ ಹುದ್ದೆಗೆ ಇಲಾಖೆಯಿಂದ ಅನುಮತಿ ಪಡೆದು ಪ್ರೌಢಶಾಲಾ ಶಿಕ್ಷಕರ ವೃಂದ ಮತ್ತು ನೇಮಕಾತಿ ನಿಯಮಗಳು 2002ರನ್ವಯ, ನೇಮಕಾತಿ ಹೊಂದಿ ಕರ್ತವ್ಯ ನಿರ್ವಹಿಸುತ್ತಿರುವ ಹಿಂದಿ ಶಿಕ್ಷಕರುಗಳನ್ನು ಅನುದಾನಕ್ಕೆ ಒಳಪಡಿಸುವ ಕುರಿತು ಕಾನೂನು ಇಲಾಖೆಯ ಅಭಿಪ್ರಾಯದಂತೆ ಅಡ್ವೋಕೇಟ್ ಜನರಲ್‌ರವರ ಅಭಿಪ್ರಾಯ ಕೋರಲಾಗಿ ಈ ಕೆಳಕಂಡಂತೆ ಅಡ್ವೋಕೇಟ್ ಜನರಲ್ ರವರು ಅಭಿಪ್ರಾಯಿಸಿರುತ್ತಾರೆ.

> . . . . The recruitment being fully in consonance with the Rules which were in existence at the relevant point of time cannot now be disturbed or rendered illegal in view of the new

Rules coming into force. Therefore, I am of the considered opinion that all the teachers who were recruited under 2002 Rules by following the due process and in consonance with the 2002 Recruitment Rules ought to be contiuned and any action to disturb them from their appointed posts will definitely be interfered with by the Courts of law if questioned by the Recruitees and in such an eventuality the State will be unable to justify its action in the Courts law. Therefore, even though, the 2016 Rules are in force and prescribe a qualification which the Assistant Teachers who under the 2002 Rules do not possess, their recruitment being in order and in terms of the earlier Rules ought to be continued and anything to the contrary will be illegal.

ತದನಂತರ ಸಭಾಪತಿಗಳು, ಕರ್ನಾಟಕ ವಿಧಾನ ಪರಿಷತ್ತು ಇವರ ಅಧ್ಯಕ್ಷತೆಯಲ್ಲಿ ನಡೆದ ದಿನಾಂಕ:01.09.2018ರ ಸಭೆಯಲ್ಲಿ ಮಾನ್ಯ ಅಡ್ವೋಕೇಟ್ ಜನರಲ್‌ರವರು ನೀಡಿರುವ ಅಭಿಪ್ರಾಯವನ್ನು ಆಧರಿಸಿ, ಪ್ರೌಢಶಾಲಾ ಶಿಕ್ಷಕರ ವೃಂದ ಮತ್ತು ನೇಮಕಾತಿ ನಿಯಮಗಳ 2016ರ ಪೂರ್ವದಲ್ಲಿ ಚಾಲ್ತಿಯಲ್ಲಿದ್ದ ಪ್ರೌಢಶಾಲಾ ಶಿಕ್ಷಕರ ವೃಂದ ಮತ್ತು ನೇಮಕಾತಿ ನಿಯಮ–2002ರನ್ವಯ ಖಾಸಗಿ ಅನುದಾನಿತ/ಅನುದಾನ ರಹಿತ ಪ್ರೌಢಶಾಲೆಗಳಲ್ಲಿ ನೇಮಕಾತಿ ಹೊಂದಿ ಕರ್ತವ್ಯ ನಿರ್ವಹಿಸುತ್ತಿದ್ದು, ಅನುದಾನಕ್ಕೆ ಒಳಪಡಿಸಲು ಬಾಕಿ ಇರುವ ಸಿಬ್ಬಂದಿಗಳನ್ನು ಅನುದಾನಕ್ಕೆ ಒಳಪಡಿಸಲು ತೀರ್ಮಾನಿಸಿ, ಅದರಂತೆ ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ : ಇಡಿ 709 ಎಸ್‌ಇಎಸ್ 2017,**
**ಬೆಂಗಳೂರು, ದಿನಾಂಕ: 04ನೇ ಅಕ್ಟೋಬರ್ 2018.**

ಪ್ರಸ್ತಾವನೆಯಲ್ಲಿ ವಿವರಿಸಲಾದ ಅಂಶಗಳ ಹಿನ್ನೆಲೆಯಲ್ಲಿ ಪ್ರೌಢಶಾಲಾ ಶಿಕ್ಷಕರ ವೃಂದ ಮತ್ತು ನೇಮಕಾತಿ ನಿಯಮ–2016ರ ಪೂರ್ವದಲ್ಲಿ, ಸರ್ಕಾರದ ಅಧಿಸೂಚನೆ ಸಂಖ್ಯೆ : ಡಿಪಿಎಆರ್ 59 ಎಸ್‌ಆರ್‌ಇ 2002, ದಿನಾಂಕ : 24.06.2003ರಲ್ಲಿ ನಿಗಧಿಪಡಿಸಿರುವ ವಿದ್ಯಾರ್ಹತೆಯನ್ವಯ ಹಾಗೂ ಹಿಂದಿ ಬಿ.ಎ., ಮತ್ತು ಬಿ.ಇಡಿ., ವಿದ್ಯಾರ್ಹತೆಗೆ ತತ್ಸಮಾನ ವಿದ್ಯಾರ್ಹತೆಯನ್ವಯ, ಇಲಾಖೆಯ ಪೂರ್ವಾನುಮತಿ ಪಡೆದು ನೇಮಕಾತಿಗಾಗಿ ಬಾಕಿ ಇರುವ

ಪ್ರಕರಣಗಳು, ಮತ್ತು ನೇಮಕಾತಿ ನಿಯಮಗಳನ್ವಯ ನೇಮಕಾತಿ ಹೊಂದಿ ಕರ್ತವ್ಯ ನಿರ್ವಹಿಸುತ್ತಿರುವ ಸಿಬ್ಬಂದಿಗಳನ್ನು, ಅನುದಾನಕ್ಕೊಳಪಡಿಸಲು ತಿರಸ್ಕೃತಗೊಂಡಿರುವ ಖಾಸಗಿ ಅನುದಾನಿತ ಪ್ರೌಢಶಾಲೆಗಳ ಹಿಂದಿ ಭಾಷಾ ಶಿಕ್ಷಕರ ನೇಮಕಾತಿಗಳನ್ನು ಪ್ರತ್ಯಾಯೋಜಿಸಿರುವ ಅಧಿಕಾರದಂತೆ ಸಂಬಂಧಪಟ್ಟ ಆಯುಕ್ತರುಗಳು ಅನುದಾನಕ್ಕೆ ಒಳಪಡಿಸಲು ಕ್ರಮವಹಿಸುವಂತೆ ಹಾಗೂ ಅನುದಾನಿತ ಮತ್ತು ಅನುದಾನರಹಿತ ಪ್ರೌಢಶಾಲೆಗಳಲ್ಲಿ ಹೊಸದಾಗಿ ಅನುದಾನಕ್ಕೆ ಒಳಪಡಿಸುವ ಹಿಂದಿ ಭಾಷಾ ಹುದ್ದೆಗಳನ್ನು ಪ್ರೌಢಶಾಲಾ ಶಿಕ್ಷಕರ ವೃಂದ ಮತ್ತು ನೇಮಕಾತಿ ನಿಯಮ-2016ರ ಪೂರ್ವದಲ್ಲಿ ಜಾರಿಯಲ್ಲಿದ್ದ 2002ರ ವೃಂದ ಮತ್ತು ನೇಮಕಾತಿ ನಿಯಮಾವಳಿಯಲ್ಲಿನ ವಿದ್ಯಾರ್ಹತೆ ಹಾಗೂ ತತ್ಸಮಾನ ವಿದ್ಯಾರ್ಹತೆ ಹೊಂದಿ ನೇಮಕಾತಿ ಹೊಂದಿರುವ ಹಿಂದಿ ಭಾಷಾ ಶಿಕ್ಷಕರ ನೇಮಕಾತಿಯನ್ನು ಅನುದಾನಕ್ಕೆ ಒಳಪಡಿಸಲು ಸರ್ಕಾರಕ್ಕೆ ಪ್ರಸ್ತಾಪಿಸಲು ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ.

ಮಟ್ಟಣ್ಣ
ಸದಸ್ಯರು
ಕರ್ನಾಟಕ ವಿಧಾನ ಪರಿಷತ್ತು

Rajyashree. V.T 4/10
(ವಿ. ಟಿ. ರಾಜ್ಯಶ್ರೀ)
ಸರ್ಕಾರದ ಅಧೀನ ಕಾರ್ಯದರ್ಶಿ,
ಶಿಕ್ಷಣ ಇಲಾಖೆ (ಪ್ರೌಢ ಶಿಕ್ಷಣ).

ಇವರಿಗೆ :-

1. ಪ್ರಧಾನ ಮಹಾಲೇಖಪಾಲರು, ಕರ್ನಾಟಕ ರಾಜ್ಯ, ಬೆಂಗಳೂರು.
2. ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು.
3. ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಧಾರವಾಡ/ಕಲಬುರಗಿ
4. ನಿರ್ದೇಶಕರು(ಪ್ರೌಢಶಿಕ್ಷಣ), ಆಯುಕ್ತರ ಕಛೇರಿ,, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು.
5. ಸಂಬಂಧಪಟ್ಟ ಜಿಲ್ಲಾ ಉಪ ನಿರ್ದೇಶಕರುಗಳಿಗೆ.
6. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.

ಪ್ರತಿ :-

1. ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ, ಇವರ ಆಪ್ತ ಕಾರ್ಯದರ್ಶಿ,